ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿ/ಸಿಬ್ಬಂದಿ-3/ಪಾಲಿಸಿ/ಹೊಕಾಅ/2019-20 ನಿರ್ದೇಶಕರ ಕಛೇರಿ,

ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರ,
ಬೆಂಗಳೂರು-12,
ದಿನಾಂಕ: 24-08-2020.

## ಪ್ರಕಟಣೆ

ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 4 ರನ್ವಯ 2020-21ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಚಿಸುವ ಅರ್ಹ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ / ಟ್ರಸ್ಟ್‌ಗಳಿಂದ ಆನ್‌ಲೈನ್ ಮೂಲಕ "ಅರ್ಜಿ ನಮೂನೆ"(Form-I) ರಲ್ಲಿ ಅರ್ಜಿ ಸಲ್ಲಿಸಲು ದಿನಾಂಕ 12-08-2020ರ ಅಧಿಸೂಚನೆಯಲ್ಲಿ ದಿನಾಂಕ 21-08-2020 ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಹಲವು ಶಿಕ್ಷಣ ಸಂಸ್ಥೆಗಳು/ಟ್ರಸ್ಟ್‌ಗಳ ಕೋರಿಕೆಯ ಮೇರೆಗೆ ದಿನಾಂಕ:25-08-2020 ರಿಂದ **27-08-2020** ರವರೆಗೆ ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸಲಾಗಿದೆ. ಹೆಸರನ್ನು ನೋಂದಾಯಿಸಿಕೊಳ್ಳಲು ಇಚ್ಛಿಸುವ ಖಾಸಗಿ ಶಿಕ್ಷಣ ಸಂಸ್ಥೆಗಳು ಟ್ರಸ್ಟ್‌ಗಳು ಜಂಟಿ ನಿರ್ದೇಶಕರು (ಮಾನ್ಯತೆ ಮತ್ತು ಅನುದಾನ), ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರಿಗೆ ಅನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು. ಅರ್ಜಿ ನಮೂನೆ ಮತ್ತು ಹೆಚ್ಚಿನ ವಿವರಗಳನ್ನು ಇಲಾಖೆಯ "www.pue.kar.nic.in" ವೆಬ್‌ಸೈಟ್‌ನಿಂದ ಪಡೆಯುವುದು.

2018-19 ಮತ್ತು 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಅನ್‌ಲೈನ್ ಮೂಲಕ ಈಗಾಗಲೇ ಅರ್ಜಿ ಸಲ್ಲಿಸಿರುವ ಶಿಕ್ಷಣ ಸಂಸ್ಥೆಗಳು / ಟ್ರಸ್ಟ್‌ಗಳು ಮತ್ತೊಮ್ಮೆ ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ.

2020-21ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಚಿಸುವ ಅರ್ಹ ಖಾಸಗಿ ಶಿಕ್ಷಣ ಸಂಸ್ಥೆಗಳು / ಟ್ರಸ್ಟ್‌ಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಂತಿಮ ಅವಕಾಶ ಕಲ್ಪಿಸಲಾಗಿದ್ದು, ಯಾವುದೇ ಕಾರಣಕ್ಕೂ ಮತ್ತೊಮ್ಮೆ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

ಜಂಟಿ ನಿರ್ದೇಶಕರು(ಮಾ&ಅ)
ಪದವಿ ಪೂರ್ವ ಶಿಕ್ಷಣ ಇಲಾಖೆ.